ಹೆಡಗಿನಾಳ ಗ್ರಾಮದಲ್ಲಿ ಬ್ಯಾರೇಜ್ ನಿರ್ಮಿಸುವುದು

338 (413) ಶ್ರೀ ನಾಡಗೌಡ ವೆಂಕಟರಾವ್ (ಸಿಂಧನೂರು): ಮಾನ್ಯ ಜಲಸಂಪನ್ಮೂಲ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ತುಂಗಭದ್ರಾ ನದಿಗೆ ಸಿಂಧನೂರು ತಾಲ್ಲೂಕಿನ ಹೆಡಗಿನಾಳ ಗ್ರಾಮದ ಹತ್ತಿರ ಬ್ಯಾರೇಜ್ ನಿರ್ಮಾಣ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಆ) ಹಾಗಿದ್ದಲ್ಲಿ, ಈ ಬ್ಯಾರೇಜ್ ನಿರ್ಮಾಣಕ್ಕಾಗಿ ಸರ್ಕಾರ ನಿಗದಿಪಡಿಸಿರುವ ಅನುದಾನದ ಮೊತ್ತವೆಷ್ಟು;

ಇ) ಹಾಗಿದ್ದಲ್ಲಿ, ಈ ಬ್ಯಾರೇಜ್ ನಿರ್ಮಾಣದ ಕಾಮಗಾರಿಯನ್ನು ಯಾವಾಗ ಕೈಗೆತ್ತಿಕೊಳ್ಳಲಾಗುವುದು;

ಈ) ಈ ಬ್ಯಾರೇಜ್ ನಿರ್ಮಾಣದ ಕಾಮಗಾರಿಯನ್ನು ತ್ವರಿತವಾಗಿ ಪೂರೈಸಲು ಸರ್ಕಾರ ಕಾಲಮಿತಿಯನ್ನೇನಾದರೂ ವಿಧಿಸಿದೆಯೇ;

ಉ) ಹಾಗಿದ್ದಲ್ಲಿ, ಯಾವಾಗ ಪ್ರಾರಂಭಿಸಿ ಮುಕ್ತಾಯಗೊಳಿಸಲಾಗುವುದು?

ಶ್ರೀ ಬಸವರಾಜ ಬೊಮ್ಮಾಯಿ (ಜಲಸಂಪನ್ಮೂಲ ಸಚಿವರು):

ಅ) ಇದೆ.

ಆ) 2010–11ನೇ ಸಾಲಿನಲ್ಲಿ ಸಮತೋಲನಾ ಜಲಾಶಯಗಳು, ಪಿಕ್‌ಗಳ ಅಡಿಯಲ್ಲಿ ರೂ. 10.00 ಲಕ್ಷಗಳ ಸಾಂಕೇತಿಕ ಅನುದಾನ ನೀಡಲಾಗಿದೆ.

ಇ) 2011–12ನೇ ಸಾಲಿನಲ್ಲಿ ಅವಶ್ಯವಿರುವ ಅನುದಾನವನ್ನು ಒದಗಿಸಿ ಕಾಮಗಾರಿಯನ್ನು ಕೈಗೆತ್ತಿಕೊಳ್ಳಲಾಗುವುದು.

ಈ) ಇಲ್ಲ

ಉ) ಈ ಪ್ರಶ್ನೆ ಉದ್ಭವಿಸುವುದಿಲ್ಲ.

ರಾಯಚೂರು ಜಿಲ್ಲೆಗೆ ಬಿಡುಗಡೆಯಾಗಿರುವ ಅನುದಾನ

339 (414) ಶ್ರೀ ನಾಡಗೌಡ ವೆಂಕಟರಾವ್ (ಸಿಂಧನೂರು): ಮಾನ್ಯ ಕನ್ನಡ ಮತ್ತು ಸಂಸ್ಕೃತಿ, ಸಣ್ಣ ನೀರಾವರಿ ಹಾಗೂ ಜವಳಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಯಚೂರು ಜಿಲ್ಲೆಯ ಕನ್ನಡ ಮತ್ತು ಸಂಸ್ಕೃತಿ ಇಲಾಖೆಗೆ ಕಳೆದ 3 ವರ್ಷಗಳಿಂದ ಸರ್ಕಾರ ಬಿಡುಗಡೆ ಮಾಡಿರುವ ಅನುದಾನದ ಮೊತ್ತ ಎಷ್ಟು; (ವರ್ಷಾವಾರು ವಿವರಗಳನ್ನು ನೀಡುವುದು)

ಆ) ಈ ಅನುದಾನದಿಂದ ರಾಯಚೂರು ಜಿಲ್ಲೆಯಲ್ಲಿ ಯಾವ ಯಾವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ;

ಇ) ರಾಯಚೂರು ಜಿಲ್ಲೆಗೆ ಸರ್ಕಾರದಿಂದ ಬಂದ ಅನುದಾನದಲ್ಲಿ ಎಲ್ಲಾ ತಾಲ್ಲೂಕುಗಳಿಗೂ ಅನುದಾನವನ್ನು ಸಮಾನವಾಗಿ ಹಂಚಿಕೆ ಮಾಡಲಾಗಿದೆಯೇ; (ತಾಲ್ಲೂಕುವಾರು ಮತ್ತು ವರ್ಷಾವಾರು ವಿವರಗಳನ್ನು ನೀಡುವುದು);

ಈ) ಈ ಅನುದಾನದಿಂದ ತಾಲ್ಲೂಕು ಕೇಂದ್ರಗಳಲ್ಲಿ ಮತ್ತು ಹೋಬಳಿ ಕೇಂದ್ರಗಳಲ್ಲಿ ಯಾವ ಯಾವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ; (ಪೂರ್ಣ ವಿವರಗಳನ್ನು ನೀಡುವುದು)?

ಶ್ರೀ ಗೋವಿಂದ ಎಂ. ಕಾರಜೋಳ (ಕನ್ನಡ ಮತ್ತು ಸಂಸ್ಕೃತಿ, ಸಣ್ಣ ನೀರಾವರಿ ಹಾಗೂ ಜವಳಿ ಸಚಿವರು):

ಅ)

2007–08	20,91,000.00
2008–09	35,40,900.00
2009–10	1,09,20,000.00

ಆ) ಸ್ಥಳೀಯ ಕಾರ್ಯಕ್ರಮ ಪ್ರಯೋಜನೆ
ಸಾಂಸ್ಕೃತಿಕ ಸೌರಭ
ಯುವ ಸೌರಭ
ಚಿಗುರು
ರಸಗ್ರಹಣ
ಸಂಘ ಸಂಸ್ಥೆ ಧನಸಹಾಯ
ಆಡಳಿತ ಕನ್ನಡ ಕಾರ್ಯ ಶಿಬಿರ
ಕನ್ನಡ ಬಾರದವರಿಗೆ ಕನ್ನಡ ಕಲಿಕೆ
ಗಡಿ ತಾಲ್ಲೂಕು ಪ್ರದೇಶಗಳಲ್ಲಿ ಕನ್ನಡ ಜಾಗೃತಿ
ಗಡಿ ಉತ್ಸವ
ಕಲಾಪ್ರತಿಭೋತ್ಸವ
ಕನಕ ಜಯಂತಿ
ಸ್ವಾತಂತ್ರೋತ್ಸವ
ಗಣರಾಜ್ಯೋತ್ಸವ
ಗುರುಶಿಷ್ಯ ಪರಂಪರೆ
ವಿಘಯೋ (ಪ.ಜಾ)
ಗಿರಿಜನ ಉಪ ಯೋಜನೆ (ಪ.ಪಂ)

ಇ) ರಾಯಚೂರು, ದೇವದರ್ಗು ಮಾನವಿ, ಲಿಂಗಸೂಗೂರು, ಸಿಂಧರುತಳಿಗೆ ಸಮಾನವಾಗಿ ನೀಡಲಾಗಿದೆ.

2007–08	20,91,000.00
2008–09	35,40,900.00
2009–10	1,09,20,000.00

ಈ) ಸ್ಥಳೀಯ ಪ್ರಯೋಜನೆ
ಸಾಂಸ್ಕೃತಿಕ ಸೌರಭ
ಯುವ ಸೌರಭ
ಚಿಗುರು
ರಸಗ್ರಹಣ
ಸಂಘ ಸಂಸ್ಥೆ ಧನಸಹಾಯ
ಗಡಿ ತಾಲ್ಲೂಕು ಪ್ರದೇಶಗಳಲ್ಲಿ ಕನ್ನಡ ಜಾಗೃತಿ
ಗಡಿ ಉತ್ಸವ
ಕನಕ ಜಯಂತಿ
ಗುರುಶಿಷ್ಯ ಪರಂಪರೆ
ವಿಫಯೋ (ಪ.ಜಾ)
ಗಿರಿಜನ ಉಪ ಯೋಜನೆ (ಪ.ಪಂ)

ತುಂಗಭದ್ರ ಎಡದಂಡೆ ನಾಲೆಯ ಉಪಕಾಲುವೆಗಳು

340 (415) ಶ್ರೀ ನಾಡಗೌಡ ವೆಂಕಟರಾವ್ (ಸಿಂಧನೂರು): ಮಾನ್ಯ ಜಲಸಂಪನ್ಮೂಲ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ತುಂಗಭದ್ರಾ ಎಡದಂಡೆ ನಾಲೆಯ 36 ಹಾಗೂ 54ರ ಉಪ ಕಾಲುವೆಗಳ ಕಾಮಗಾರಿಯು ಕಳಪೆ ಗುಣಮಟ್ಟದಿಂದ ಹಾಳಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಈ ಕಳಪೆ ಗುಣಮಟ್ಟದ ಕಾಮಗಾರಿಗಳನ್ನು ನಿರ್ವಹಿಸಿದ ಗುತ್ತಿಗೆದಾರರು ಯಾರು; (ಹೆಸರು ಮತ್ತು ವಿಳಾಸವನ್ನೊಳಗೊಂಡ ಪೂರ್ಣ ಮಾಹಿತಿಯನ್ನು ನೀಡುವುದು)

ಇ) ಈ ಕಳಪೆ ಕಾಮಗಾರಿಯನ್ನು ನಿರ್ವಹಿಸಿದ ಗುತ್ತಿಗೆದಾರರು ಮತ್ತು ಅಧಿಕಾರಿಗಳ ಮೇಲೆ ಸರ್ಕಾರ ಕ್ರಮ ಕೈಗೊಂಡಿದೆಯೇ;